**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ , ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 672/2020**

**ಚಾಸಾ ಃ- 14 / ಪ್ರಾಸಾ ಃ- 3**

| | |
|---|---|
| ಹೆಸರು | **ರವಿಕುಮಾರ್** |
| ತಂದೆಯ ಹೆಸರು | ಗಂಗಾಧರಯ್ಯ |
| ವಯಸ್ಸು | **44** |
| ಉದ್ಯೋಗ | **ಪಿ. ಐ** |
| ವಿಳಾಸ | **ಸೂಲಿಬೆಲೆ** |

**ದಿನಾಂಕಃ17-01-2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ **ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ನಾನು 2018 ರ ಡಿಸಂಬರ್ ತಿಂಗಳಿನಿಂದ 2020 ನೇ ಇಸವಿಯ ಫೆಬ್ರವರಿಯವರೆ ಮಾಗಡಿ ವೃತ್ತದ ವೃತ್ತ ನಿರೀಕ್ಷಕನಾಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕ.19-05-2019 ರಂದು ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-13 ರವರಿಂದ ಪಡೆದುಕೊಂಡಿರುತ್ತೇನೆ. ಅದೇ ದಿನದಂದು ಕೃತ್ಯ ನಡೆದ ಸ್ಥಳ ಕ್ಕೆ ಭೇಟಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಪ್ರಾಸಾ1 ಮತ್ತು 2 ರವರ ಸಮಕ್ಷಮದಲ್ಲಿ ಬೆಳಗ್ಗೆ 7.15 ರಿಂದ 8 ಗಂಟೆಯವರೆಗೆ ನಿಪಿ-1 ರಂತೆ ಸ್ಥಳ ಪಂಚನಾಮೆಯನ್ನು ಮಾಡಿರುತ್ತೇನೆ. ಈಗ ಸಾಕ್ಷಿಗೆ ನಿಪಿ-1 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಕಚ್ಚಾ ನಕ್ಷೆಯನ್ನು ತಯಾರು ಮಾಡಲಾಯಿತು. ಈಗ ಸಾಕ್ಷಿಗೆ ಕಚ್ಚಾ ನಕ್ಷೆಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಕಚ್ಚಾ ನಕ್ಷೆಯನ್ನು ನಿಪಿ-11 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಅಪಘಾತಕ್ಕೆ

ಒಳಗಾದ ದ್ವಿ ಚಕ್ರವಾಹನ ಸಂ. ಕೆಎ-05-ಕೆಆರ್-8176 ಮತ್ತು ಅಪಘಾತ ಪಡಿಸಿದ ಸ್ವಿಫ್ಟ್ ಡಿಸೈರ್ ಕಾರಿನ ಸಂ. ಕೆಎ-42-ಎ-9163 ಯನ್ನು ವಶಪಡಿಸಿಕೊಳ್ಳಲಾಯಿತು. ಈಗ ಸಾಕ್ಷಿಗೆ ನಿಪಿ-2 ರಿಂದ 7 ನ್ನು ತೋರಿಸಿದ್ದು, ಸದರಿ ವಾಹನಗಳನ್ನು ಪಂಚನಾಮೆ ಮಾಡುವ ಸಮಯದಲ್ಲಿ ವಶಪಡಿಸಿಕೊಳ್ಳಲಾಗಿದೆ. ವಶಪಡಿಸಿಕೊಂಡ ವಾಹನಗಳನ್ನು ಮಾಲುಪಟ್ಟಿ ಸಂ. 100/2019 ರಂತೆ ದಾಖಲಿಸಲಾಗಿರುತ್ತದೆ. ಈಗ ಸಾಕ್ಷಿಗೆ ಮಾಲು ಪಟ್ಟಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಮಾಲುಪಟ್ಟಿಯನ್ನು ನಿಪಿ- 12 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು.

ಅದೇ ದಿನದಂದು ಶವತನಿಖೆಗೆ ಸಹಕರಿಸುವಂತೆ ಚಾಸಾ-4 ರಿಂದ 6 ರವರಿಗೆ ನೋಟಿಸ್ ನ್ನು ನೀಡಲಾಗಿರುತ್ತದೆ. ಈಗ ಸಾಕ್ಷಿಗೆ ನೋಟಿಸ್ ನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ನೋಟಿಸ್ ನ್ನು ನಿಪಿ-13 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು. ದಿ.24-05-2019 ರಂದು ಅಪಘಾತ ಪಡಿಸಿದ ವಾಹನದ ಮಾಲೀಕರಾದ ಆರೋಪಿಗೆ ಕಲಂ. 133 ಐ. ಎಂ. ವಿ ಕಾಯಿದೆ ರೀತ್ಯ ನೋಟಿಸ್ ನ್ನು ನೀಡಿರುತ್ತೇನೆ. ಈಗ ಸಾಕ್ಷಿಗೆ ನೋಟಿಸ್ ನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ನೋಟಿಸ್ ನ್ನು ನಿಪಿ-14 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು. ಆರೋಪಿಯು ನಿಪಿ-14 ಕ್ಕೆ ಉತ್ತರವನ್ನು ನೀಡಿರುತ್ತಾರೆ. ಈಗ ಸಾಕ್ಷಿಗೆ ಉತ್ತರವನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಉತ್ತರವನ್ನು ನಿಪಿ-15 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು. ಅದೇ ದಿನದಂದು ಅಪಘಾತ ಪಡಿಸಿದ ವಾಹನವನ್ನು ಚಾಸಾ-11 ರವರಿಂದ ತಪಾಸಣೆ ಮಾಡಲಾಗಿರುತ್ತದೆ. ಅದೇ ದಿನದಂದು ಆರೋಪಿಯನ್ನು ದಸ್ತಗಿರಿ ಮಾಡಿ ಅವರ ಹೇಳಿಕೆಯನ್ನು ಪಡೆದು ಸೂಕ್ತ ಜಾಮೀನಿನ ಮೇರೆಗೆ ಬಿಡುಗಡೆ ಮಾಡಲಾಗಿರುತ್ತದೆ. ನಾನು ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ.

ಇಂದು ನ್ಯಾಯಾಲಯದ ಮುಂದೆ ಆರೋಪಿಯು ಹಾಜರಿದ್ದಾರೆ. ಅದೇ ದಿನದಂದು ಆರೋಪಿಯಿಂದ ಇಂಡೆಮ್ನಿಟಿ ಬಾಂಡ್ ಪಡೆದು ಆರೋಪಿಗೆ ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ಈಗ ಸಾಕ್ಷಿಗೆ ಇಂಡೆಮ್ನಿಟಿ ಬಾಂಡ್ ನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಇಂಡೆಮ್ನಿಟಿ ಬಾಂಡ್ ನ್ನು ನಿಪಿ-16 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-16(ಎ) ಎಂದು ಗುರುತಿಸಲಾಯಿತು.

ದಿ.31-05-2019 ರಂದು ಚಾಸಾ-9 ರವರನ್ನು ವಿಚಾರಣೆ ಮಾಡಿ ಅವರ ಹೇಳಿಕೆಯನು ಪಡೆದುಕೊಂಡಿರುತ್ತೇನೆ. ಈಗ ಸಾಕ್ಷಿಗೆ ಚಾಸಾ-9 ರವರ ಹೇಳಿಕೆಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಹೇಳಿಕೆಯನ್ನು ನಿಪಿ-17 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-17(ಎ) ಎಂದು ಗುರುತಿಸಲಾಯಿತು. ಅದೇ ದಿನದಂದು ಚಾಸಾ-9 ರವರಿಂದ ಇಂಡೆಮ್ನಿಟಿ ಬಾಂಡ್ ಪಡೆದು ದ್ವಿಚಕ್ರ ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ಈಗ ಸಾಕ್ಷಿಗೆ ಇಂಡೆಮ್ನಿಟಿ ಬಾಂಡ್ ನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಇಂಡೆಮ್ನಿಟಿ ಬಾಂಡ್ ನ್ನು ನಿಪಿ-18 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-18(ಎ) ಎಂದು ಗುರುತಿಸಲಾಯಿತು. ದಿ.10-06-2019 ರಂದು ಚಾಸಾ-12 ರವರಿಂದ ಮೃತ ವ್ಯಕ್ತಿಯ ಪಿ. ಎಂ ವರದಿಯನ್ನು ಪಡೆದುಕೊಂಡಿರುತ್ತೇನೆ. ಈಗ ಸಾಕ್ಷಿಗೆ ನಿಪಿ-9 ನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ದಿ.27-06-2019 ರಂದು ಚಾಸಾ-11 ರವರಿಂದ ಐ. ಎಂ. ವಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಈಗ ಸಾಕ್ಷಿಗೆ ನಿಪಿ-10 ನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಅದೇ ದಿನದಂದು ತನಿಖೆಯನ್ನು ಪೂರ್ಣಗೊಳಿಸಿ ಮಾನ್ಯ ನ್ಯಾಯಾಲಯಕ್ಕೆ ಆರೋಪಿಯ ವಿರುದ್ದ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲು :- ಆರೋಪಿಯ ಪರ ಶ್ರೀ. ಸಿ. ಡಿ. ಪಿ, ವಕೀಲರಿಂದ :-**

ನಿಪಿ-1 ಕ್ಕೆ ಸಹಕರಿಸುವಂತೆ ಹೇಳಿ ನಾನು ಪ್ರಾಸಾ-1 ಮತ್ತು 2 ರವರಿಗೆ ನೋಟಿಸ್ ನ್ನು ನೀಡಿರುವುದಿಲ್ಲ, ಆದರೆ ಮೌಖಿಕವಾಗಿ ತಿಳಿಸಿರುತ್ತೇನೆ. ನೀವು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ ಮತ್ತು ನಿಪಿ-1 ರಂತೆ ಪಂಚನಾಮೆಯನ್ನು ಸಹ ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಪಿ-2 ರಿಂದ 7 ರ ಫೋಟೋಗಳನ್ನು ಅಫಘಾತ ನಡೆದ ಸ್ಥಳದಲ್ಲಿ ತೆಗೆಯಲು ನಿಮಗೆ ತೊಂದರೆ ಇತ್ತಾ ಎಂದರೆ ಸಾಕ್ಷಿಯು ಇಲ್ಲ ಎನ್ನುತ್ತಾರೆ. ನಿಪಿ-12 ರಲ್ಲಿ ನೀವು ವಶಪಡಿಸಿಕೊಂಡಿರುವ ದ್ವಿ ಚಕ್ರವಾಹನದ ಬಗ್ಗೆ ನಮೂದಿಸಲು ನಿಮಗೆ ತೊಂದರೆ ಇತ್ತಾ ಎಂದರೆ ಸಾಕ್ಷಿಯು ಇಲ್ಲ ಎನ್ನುತ್ತಾರೆ. ನೀವು ಸದರಿ ದ್ವಿಚಕ್ರವಾಹನಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಚಾಸಾ-9 ರವರಿಗೆ ದ್ವಿಚಕ್ರವಾಹನವನ್ನು ಬಿಡುಗಡೆ ಮಾಡುವ ಸಮಯದಲ್ಲಿ ನೀವು ಯಾವುದೇ ದಾಖಲೆಗಳನ್ನು ಪರಿಶೀಲನೆ ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ನಿಪಿ-8 ರಂತೆ ಶವಾ ತನಿಖೆಗೆ ಸಹಕರಿಸುವಂತೆ ಸಾಕ್ಷಿದಾರರುಗಳಿಗೆ ನೋಟಿಸ್ ನ್ನು ನೀಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ನಿಪಿ-14 ರಂತೆ ಆರೋಪಿಗೆ ನೋಟಿಸ್ ನ್ನು ನೀಡಿರುವುದಿಲ್ಲ ಮತ್ತು ಅದಕ್ಕೆ ನಿಪಿ-15 ರಂತೆ ಆರೋಪಿಯು ಉತ್ತರವನ್ನು ಸಹ ನೀಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ನಿಪಿ-10 ರಂತೆ ಚಾಸಾ-11 ರವರಿಂದ ಯಾವುದೇ ವರದಿಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ಆರೋಪಿಯನ್ನು ದಸ್ತಗಿರಿ ಮಾಡಿರುವುದಿಲ್ಲ ಮತ್ತು ಅವರನ್ನು ಜಾಮೀನಿನ ಮೇರೆಗೆ ಬಿಡುಗಡೆ ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ನೀವು ನಿಪಿ-11 ರಂತೆ ಅಪಘಾತ ನಡೆದ ಸ್ಥಳದಲ್ಲಿ ಕಚ್ಚಾ ನಕ್ಷೆಯನ್ನು ತಯಾರು ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ಸಾಕ್ಷಿದಾರರುಗಳ ಹೇಳಿಕೆಯನ್ನು ಠಾಣೆಯಲ್ಲಿಯೇ ಸೃಷ್ಟಿ ಮಾಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ಮೃತರ ಕುಟುಂಬಕ್ಕೆ ಸಹಾಯ ಮಾಡುವ ಉದ್ದೇಶದಿಂದ ಚಾಸಾ-1 ರವರಿಂದ ಸುಳ್ಳು ದೂರನ್ನು ದಾಖಲಿಸಿಕೊಂಡು ನಿಮಗೆ ಅನುಕೂಲ ಆಗುವಂತೆ ತನಿಖೆಯನ್ನು ಮಾಡಿ ಸುಳ್ಳು ಸಾಕ್ಷ್ಯಾ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ**